ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲ್ಪಟ್ಟಿರುವ ಅನುದಾನ

520 (683) ಶ್ರೀ ರಹೀಂ ಖಾನ್ (ಬೀದರ್) : ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ವತಿಯಿಂದ ಯಾವ್ಯಾವ ತಾಲ್ಲೂಕುಗಳಿಗೆ ಅನುದಾನವನ್ನು ಬಿಡುಗಡೆ ಮಾಡಿ, ಅಭಿವೃದ್ಧಿಗೊಳಿಸಲಾಗಿದೆ (ವಿವರ ಒದಗಿಸುವುದು)?

ಆ) ಬೀದರ್ ಅತೀ ಹಿಂದುಳಿದ ಪ್ರದೇಶವಾಗಿದ್ದು, ಈ ತಾಲ್ಲೂಕಿನ ಅಭಿವೃದ್ಧಿಗೆ 2008 ನೇ ಸಾಲಿನಿಂದ ಇಲ್ಲಿಯವರೆವಿಗೂ ಬಿಡುಗಡೆ ಮಾಡಲ್ಪಟ್ಟಿರುವ ಅನುದಾನ ಎಷ್ಟು (ವಿವರ ಒದಗಿಸುವುದು)?

ಇ) ಈ ಯೋಜನೆಯಲ್ಲಿ ಬಿಡುಗಡೆ ಮಾಡಬೇಕಾಗಿರುವ ಅನುದಾನ ಎಷ್ಟು?

ಶ್ರೀ ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು) :

ಅ) 2010–11ನೇ ಸಾಲಿನಲ್ಲಿ ಮಂಡಳಿಗೆ ಒದಗಿಸಿದ ಅನುದಾನವನ್ನು ಮಂಡಳಿಯ ವ್ಯಾಪ್ತಿಯಲ್ಲಿ ಬರುವ 32 ತಾಲ್ಲೂಕುಗಳಲ್ಲಿನ ಎಲ್ಲಾ 42 ವಿಧಾನಸಭಾ ಕ್ಷೇತ್ರಗಳಿಗೆ ತಲಾ ರೂ. 39.20 ಲಕ್ಷಗಳನ್ನು ಸಮಾನವಾಗಿ ಹಂಚಿಕೆ ಮಾಡಲಾಗಿದೆ.

ಆ) ಡಾ॥ ನಂಜುಂಡಪ್ಪ ವರದಿಯಲ್ಲಿ ಬೀದರ್ ಹಿಂದುಳಿದ ತಾಲ್ಲೂಕು ಎಂದು ಪರಿಗಣಿಸಲಾಗಿಲ್ಲ. ಬೀದರ್ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬೀದರ್ ಹಾಗೂ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರಗಳಿವೆ. ಬೀದರ್ ತಾಲ್ಲೂಕಿನ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕೆಳಕಂಡಂತೆ ಅನುದಾನವನ್ನು ಹಂಚಿಕೆ ಮಾಡಲಾಗಿದೆ:

2008–09 – ರೂ.30.00 ಲಕ್ಷ
2009–10 – ರೂ. 25.00 ಲಕ್ಷ ಮತ್ತು
2010–11 – ರೂ. 39.20 ಲಕ್ಷ

ಇ) 2010–11ನೇ ಸಾಲಿನಲ್ಲಿ ಸರ್ಕಾರವು ಮಂಡಳಿಗೆ ನಿಗದಿಪಡಿಸಿದ ರೂ. 23.00 ಕೋಟಿ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಿಡುಗಡೆ ಮಾಡಲಾಗಿದೆ.

ಬೀದರ್ ತಾಲ್ಲೂಕಿನಲ್ಲಿ ಸುವರ್ಣ ಗ್ರಾಮ ಯೋಜನೆ ಅನುಷ್ಠಾನ

521 (684) ಶ್ರೀ ರಹೀಂ ಖಾನ (ಬೀದರ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುವರ್ಣ ಗ್ರಾಮ ಯೋಜನೆಯಡಿಯಲ್ಲಿ ಬೀದರ್ ತಾಲ್ಲೂಕಿನ ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಅಭಿವೃದ್ಧಿಪಡಿಸಿ ಮೂಲಭೂತ ಸೌಲಭ್ಯವನ್ನು ಕಲ್ಪಿಸಲಾಗಿದೆ (ವಿವರ ಒದಗಿಸುವುದು);

ಆ) ಈ ಯೋಜನೆಯಡಿಯಲ್ಲಿ ಅಭಿವೃದ್ಧಿಗೆ ಬಿಡುಗಡೆ ಮಾಡಲ್ಪಟ್ಟ ಅನುದಾನ ಎಷ್ಟು; ಬಾಕಿ ಉಳಿದಿರುವ ಅನುದಾನ ಎಷ್ಟು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) :

ಅ) ಸುವರ್ಣ ಗ್ರಾಮ ಯೋಜನೆಯಡಿ ಬೀದರ್ ತಾಲ್ಲೂಕಿನಲ್ಲಿ ಹಂತವಾರು ಆಯ್ಕೆಯಾದ ಗ್ರಾಮಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಈ ಯೋಜನೆಯಡಿ ಬೀದರ್ ತಾಲ್ಲೂಕಿಗೆ ರೂ.11.25 ಕೋಟಿ ಅನುದಾನದ ಬಿಡುಗಡೆ ಮಾಡಲಾಗಿದೆ ಹಾಗೂ ಬಾಕಿ ಉಳಿದಿರುವ ಅನುದಾನ ರೂ.16.79 ಕೋಟಿ.